# ನಮ್ಮ ನಡೆ ಮತಗಟ್ಟೆ ಕಡೆಗೆ ಜಾಗೃತಿ ಜಾಥ

## ಮತದಾನ ಮಾಡಿ, ಸಂವಿಧಾನ ಬಲಪಡಿಸಿ ವೈಶಾಲಿ.ಎಂ.ಎಲ್



ಗದಗ ಏ–:– ಭಾರತ ಚುನಾವಣಾ ಅಯೋಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯ ತ್, ವ್ಯವಸ್ಥಿತ ಮತದಾರರ ಶಿಕ್ಷ ಣ ಮತ್ತು ಸಹ ಭಾಗಿತ್ವ ಸಮಿತಿ (ಸ್ವೀಪ್),ಹಿಂದುಳಿದ ಕಲ್ಯಾಣ ಇಲಾಖೆ ಸಹಯೋಗದೊಂದಿಗೆ 'ನಮ್ಮ ನಡೆ ಮತಗಟ್ಟೆ ಕಡೆಗೆ' ಮತದಾನ ಜಾಗೃತಿ ಕಾರ್ಯಕ್ರಮವು ಮಂಗಳವಾರ ನಡೆಯಿತು.ನಗರದ ಬೆಟಗೇರಿಯ ಅಂಬಾಭವಾನಿ ವೃತ್ತದಲ್ಲಿ ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಹಾಗೂ ಜಿ.ಪಂ ಸಿಇಒ ಭರತ್.ಎಸ್ ಅವರು ಕಾಲ್ನಡಿಗೆ ಮತ್ತು ಬೈಕ್ ರ್ಯಾಲಿ ಗೆ ಚಾಲನೆ ನೀಡಿದರು.ಜಿಲ್ಲಾಧಿಕಾರಿ ವೈಶಾಲಿ.ಎಂ.ಎಲ್ ಅವರು ಮಾತನಾಡಿ

ಕಳೆದ ಚುನಾವಣೆಯಲ್ಲಿ ಬೆಟಗೇರಿಯ ಭಾಗದಲ್ಲಿ ಕಡಿಮೆ ಮತದಾನ ವಾಗಿದ್ದು, ಈ ಪ್ರದೇಶಗಳಲ್ಲಿ ಈ ಬಾರಿ ನೂರಕ್ಕೆ ನೂರರಷ್ಟು ಮತದಾನವಾಗಬೇಕು. ಮತದಾನ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ತಮ್ಮ ಮತಗಟ್ಟೆ ಸಂಖ್ಯೆ, ಮತಗಟ್ಟೆ ಭಾಗದ ಕ್ರಮ ಸಂಖ್ಯೆ, ಮುಂತಾದ ಮಾಹಿತಿ ತಿಳಿದುಕೊಂಡು ಮತದಾನ ಕಡ್ಡಾಯವಾಗಿ ಮಾಡುವಂತಾಗಬೇಕು ಎಂದು ಕೋರಿದರು.ಜಿ.ಪಂ ಸಿಇಒ ಭರತ್.ಎಸ್ ಅವರು ಮೇ.7 ರಂದು ಮತದಾನ ನಡೆಯಲಿದ್ದು,ಊರ ಜಾತ್ರೆಯ ರೀತಿ ಕುಟುಂಭ, ಸ್ನೇಹಿತರೊಂದಿಗೆ ಹದಿನೆಂಟು ವರ್ಷ ಮೇಲ್ಪಟ್ಟ ಎಲ್ಲರೂ ಮತದಾನ ಮಾಡುವಂತಾಗಬೇಕು. ಪ್ರತಿ ಮತವೂ ಸಹ ಅಮೂಲ್ಯವಾಗಿದೆ ಎಂದು ತಿಳಿಸಿದರು.ಮತದಾನ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಎಲ್ಲರೂ ಸಹಕರಿಸಬೇಕು. ಮತದಾನವನ್ನು ಹಬ್ಬದ ರೀತಿಯಲ್ಲಿ ಆಚರಿಸುವ ಮೂಲಕ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು ಎಂದು ಹಿಂದುಳಿದ ಕಲ್ಯಾಣಾಧಿಕಾರಿ ರವಿ ಗುಂಜೀಕರ ತಿಳಿಸಿದರು.ಜಾಥಾ ಕಾರ್ಯಕ್ರಮವು ಗದಗ ಬೆಟಗೇರಿಯ ಅಂಬಾಭವಾನಿ ವೃತ್ತದಿಂದ ಕುರಟ್ಟಿಪೇಟೆ, ಬಸ್ ನಿಲ್ದಾಣ ಮಂಜುನಾಥ ನಗರ, ಹುಯಿಲಗೋಳ ರಸ್ತೆ ಮಾರ್ಗವಾಗಿ ತಾರಾಲಯವನ್ನು ತಲುಪಿತು ಈ ಜಾಥಾದಲ್ಲಿ ಬೈಕ್ ರ್ಯಾಲಿ ನಾನಾ ಕಲಾ ತಂಡಗಳಿಂದ ಕಲಾ ಪ್ರದರ್ಶನ, ವಿದ್ಯಾರ್ಥಿಗಳ ವೇಷಭೂಷಣಗಳ ಮೂಲಕ ಮತದಾರರಲ್ಲಿ ಜಾಗೃತಿ ಮೂಡಿಸಿದ್ದು ವಿಶೇಷವಾಗಿತ್ತು.

ಜಿ.ಪಂ.ಉಪ ಕಾರ್ಯದರ್ಶಿ ಸಿ.ಬಿ.ದೇವರಮನಿ, ವಿವಿಧ ಇಲಾಖೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ವಸತಿ ನಿಲಯದ ವಿದ್ಯಾರ್ಥಿಗಳು ಕಲಾ ತಂಡ ಇತರರು ಇದ್ದರು.

# ಬಿಜೆಪಿಯವರು ಸುಳ್ಳಿನ ಕಾರ್ಖಾನೆ ಇದ್ದಂಗೆ:ಸಿಎಂ ಸಿದ್ದರಾಮಯ್ಯ




ಯರಗಟ್ಟಿ: ಬಿಜೆಪಿ ಬೆಳಗಾವಿಯಲ್ಲಿ ಟಿಕೆಟ್ ನೀಡಿಕೆಯಲ್ಲೂ ಅನ್ಯಾಯ ಮಾಡಿದೆ. ಬೆಳಗಾವಿಯ ಸ್ವಾಭಿಮಾನ ಧಿಕ್ಕರಿಸಿ ಹುಬ್ಬಳ್ಳಿಯರಿಗೆ ಟಿಕೆಟ್ ನೀಡಿದೆ.

ಬಿಜೆಪಿ ಅಭ್ಯರ್ಥಿಯಿಂದ ಬೆಳಗಾವಿಗೆ ಏನಾದರೂ ಒಳ್ಳೆಯದು ಆಗಿದೆಯೇ ಪ್ರಶ್ನಿಸಿದ ಸಚಿವರು, ಐಐಟಿ, ಐಟಿಬಿಟಿ ಕಂಪನಿಗಳನ್ನೆಲ್ಲ ಹುಬ್ಬಳ್ಳಿ–ಧಾರವಾಡಕ್ಕೆ ಕೊಂಡೊಯ್ದ ಜಗದೀಶ್ ಶೆಟ್ಟರ್ ಗೆ ಬೆಳಗಾವಿಯ ಜನತೆ ಸರಿಯಾದ ಪಾಠ ಕಲಿಸಲಿದ್ದಾರೆ ಎಂದು ಎಚ್ಚರಿಸಿದರು.ದೇಶದಲ್ಲಿ ಕಾಂಗ್ರೆಸ್ ಪಕ್ಷ 75 ವರ್ಷಗಳಿಂದ ಆಡಳಿತ ನಡೆಸುತ್ತಿದೆ ಎನ್ನುವುದನ್ನೇ ಬಿಜೆಪಿಯವರು ಮರೆತಿದ್ದಾರೆ.

ಕೇವಲ 10 ವರ್ಷಗಳಿಂದ ಭಾರತ ಇದೆಯೆಂದು ಅವರು ಭ್ರಮೆಯಲ್ಲಿದ್ದಾರೆ. ಇಂದು ಭಾರತವನ್ನು ಎಲ್ಲರೂ ತಲೆಎತ್ತಿ ನೋಡುವಂತೆ ಮಾಡಿದ್ದು ಕಾಂಗ್ರೆಸ್ ಪಕ್ಷ ಎನ್ನುವುದನ್ನು ಬಿಜೆಪಿಯವರು ಎಂದೂ ಮರೆಯಬಾರದು; ಕೇವಲ 10 ವರ್ಷಗಳಲ್ಲಿ ಭಾರತ ವಿಶ್ವಮಾನ್ಯವಾಗಲು ಹೇಗೆ ಸಾಧ್ಯವಾಯಿತು? ಬಿಜೆಪಿಯವರು, ಪ್ರಧಾನಿ ಮೋದಿಯವರು ಕಳೆದ ಹತ್ತು ವರ್ಷಗಳಲ್ಲಿ ತಾವು ಮಾಡಿದ ಕೆಲಸಗಳನ್ನು ಜನರ ಮುಂದಿಟ್ಟು ಮತಯಾಚನೆ ಮಾಡಬೇಕಿತ್ತು; ಆದರೆ, ಅವರಲ್ಲಿ ಯಾವ ಸಾಧನೆಗಳೂ ಇಲ್ಲ; ಹೀಗಾಗಿ ಸಮಾಜದಲ್ಲಿ ಒಡಕು ಮೂಡಿಸುವ ಹೇಳಿಕೆಗಳನ್ನು ನೀಡುತ್ತಿದ್ದಾರೆ.

ಬಿಜೆಪಿಯವರು ಹಲವು ಸುಳ್ಳುಗಳನ್ನೇ ಸತ್ಯವೆಂದು ಹೇಳುತ್ತಿದ್ದಾರೆ; ಜನರೇನು ದಡ್ಡರಲ್ಲ. ಚುನಾವಣೆ ಮೂಲಕ ಸರಿಯಾದ ತೀರ್ಪು ನೀಡಲಿದ್ದಾರೆ.

ಕಾಂಗ್ರೆಸ ಪಕ್ಷ ಹಿಂದಿನಿಂದಲೂ ಜನರಿಗೆ ಕೊಟ್ಟ ಮಾತನ್ನು ಉಳಿಸಿಕೊಂಡು ರಾಷ್ಟ್ರ ಮತ್ತು ರಾಜ್ಯದ ಜನರ ಸೇವೆ ಮಾಡುತ್ತಾ ಬಂದಿದೆ; ಹಾಗಾಗಿ ಕಾಂಗ್ರೆಸ್ ಮೇಲೆ ಜನರು ವಿಶ್ವಾಸವನ್ನಿಟ್ಟಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಈ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ, ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್, ಸಚಿವರಾದ ಭೈರತಿ ಸುರೇಶ್, ಶಾಸಕರಾದ ಅಶೋಕ್ ಪಟ್ಟಣ್, ವಿಶ್ವಾಸ್ ವೈದ್ಯ, ರಾಜು ಸೇಠ್, ಮಹಾಂತೇಶ್ ಕೌಜಲಗಿ, ಬಾಬಾ ಸಾಹೇಬ್ ಪಾಟೀಲ್, ವಿನಯ್ ಕುಲಕರ್ಣಿ, ವಿಧಾನ ಪರಿಷತ್ ಸದಸ್ಯರಾದ ಪ್ರಕಾಶ್ ರಾಥೋಡ್, ಚನ್ನರಾಜ ಹಟ್ಟಿಹೊಳಿ, ಕಾಂಗ್ರೆಸ್ ವಕ್ತಾರೆ ತೇಜಸ್ವಿನಿ ಗೌಡ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ವಿನಯ್ ನಾವಲಗಟ್ಟಿ ಸೇರಿದಂತೆ ವಿವಿಧ ಘಟಕಗಳ, ಬ್ಲಾಕ್ ಗಳ ಅಧ್ಯಕ್ಷರು, ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಜಿಲ್ಲೆಗೆ ಅನ್ಯಾಯವಾಗುವುದನ್ನು ತಡೆಯುವ ಸಾಮರ್ಥ್ಯ ಮೃಣಾಲ್ ಗೆ ಇದೆ – ಚನ್ನರಾಜ ಹಟ್ಟಿಹೊಳಿ



ಬೆಳಗಾವಿ: ಮೃಣಾಲ ಹೆಬ್ಬಾಳಕರ್ ಅತ್ಯಂತ ಕ್ರಿಯಾಶೀಲ ಯುವಕನಾಗಿದ್ದು, ಲೋಕಸಭೆಗೆ ಹೋದಲ್ಲಿ ಜಿಲ್ಲೆಗೆ ಅನ್ಯಾಯವಾಗುವುದನ್ನು ತಡೆಯುವ ಸಾಮರ್ಥ್ಯವಿದೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ಬೆಳಗಾವಿಯ ಅನಗೋಳದಲ್ಲಿ ಲೋಕಸಭೆ ಚುನಾವಣೆಯ ಪ್ರಚಾರ ಕೈಗೊಂಡು ಮಾತನಾಡಿದ ಅವರು, ವಿದ್ಯಾವಂತ, ಎಲ್ಲ ಭಾಷೆಗಳಲ್ಲಿ ನಿರರ್ಗಳವಾಗಿ ಮಾತನಾಡಬಲ್ಲ, ನಮ್ಮನ್ನು ಪ್ರತಿನಿಧಿಸುವ ಸಮರ್ಥ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್. ಅವರನ್ನು ಆಯ್ಕೆ ಮಾಡಿದರೆ ಕೇವಲ ಒಂದೇ ವರ್ಷದಲ್ಲಿ ನಮ್ಮ ಮತ ಸಾರ್ಥಕವಾಯಿತು ಎನ್ನುವ ಭಾವನೆ ಬರುವಂತೆ ಕೆಲಸ ಮಾಡುತ್ತಾನೆ ಎಂದು ಅವರು ಹೇಳಿದರು.

ಬೆಳಗಾವಿ ಲೋಕಸಭಾ ಕ್ಷೇತ್ರದ ಎಲ್ಲ 8 ವಿಧಾನ ಸಭಾ ಕ್ಷೇತ್ರಗಳಿಂದಲೂ ಕಾಂಗ್ರೆಸ್ ಅಭ್ಯರ್ಥಿ ಪರ ಉತ್ತಮ ಅಭಿಪ್ರಾಯ ವ್ಯಕ್ತವಾಗುತ್ತಿದೆ. ಎಲ್ಲ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅತ್ಯಧಿಕ ಮುನ್ನಡೆ ಸಾಧಿಸಲಿದೆ. ಬಿಜೆಪಿ ಅಭ್ಯರ್ಥಿ ಕುರಿತು ಅವರ ಪಕ್ಷದಲ್ಲೇ ದೊಡ್ಡ ಮಟ್ಟದ ಅಸಮಾಧಾನವಿದೆ. ಕೆಲವು ಮುಖಂಡರು ಕಾಟಾಚಾರಕ್ಕೆನ್ನುವಂತೆ ಪ್ರಚಾರಕ್ಕೆ ಹೋಗುತ್ತಿದ್ದಾರೆ. ಜಗದೀಶ್ ಶೆಟ್ಟರ್ ಗೆ ಮತ ಹಾಕಲು ಜಿಲ್ಲೆಯ ಸ್ವಾಭಿಮಾನಿ ಜನರ ಮನಸ್ಸು ಒಪ್ಪುವುದಿಲ್ಲ. ಅವರು ಜಿಲ್ಲೆಗೆ ಮಾಡಿರುವ ಅನ್ಯಾಯವನ್ನು ನೋಡಿಯೂ ಮತ ಹಾಕಿದರೆ ರಾತ್ರಿ ಕಂಡ ಬಾವಿಯಲ್ಲಿ ಹಗಲು ಬಿದ್ದಂತಾಗುತ್ತದೆ ಎಂದು ಚನ್ನರಾಜ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸ್ಥಳೀಯ ನಿವಾಸಿಗಳು, ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಹುಲಿಗಿಯಲ್ಲಿ ಕ್ಷಯರೋಗ ನಿರ್ಮೂಲನಾ ಜಾಗೃತಿ ಕಾರ್ಯಕ್ರಮ



ಕೊಪ್ಪಳ, ಏ–: ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ಕೊಪ್ಪಳ ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ಹುಲಿಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಂಯುಕ್ತಾಶ್ರಯದಲ್ಲಿ ಸೋಮವಾರದಂದು ಹುಲಿಗಿ ಗ್ರಾಮದ 04ನೇ ವಾರ್ಡಿನ ಚನ್ನಮ್ಮ ವೃತ್ತದ ಹತ್ತಿರವಿರುವ ಮಸೀದಿ ಹತ್ತಿರ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಜಾಗೃತಿ ಕಾರ್ಯಕ್ರಮ ನಡೆಯಿತು.

ಹುಲಿಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿಗಳಾದ ಡಾ. ಶಫಿಉಲ್ಲಾ, ಅವರು ಕಾರ್ಯಕ್ರಮ ಕುರಿತು ಮಾತನಾಡಿ, ಟಿ.ಬಿ ರೋಗವೂ ಸೋಂಕಿತ ರೋಗಿಯು ಕೆಮ್ಮುವುದರ ಮೂಲಕ ಹಾಗೂ ಶೀನುವುದರ ಮೂಲಕ ಒಬ್ಬರಿಂದ ಇನ್ನೊಬ್ಬರಿಗೆ ಪ್ರಸಾರವಾಗುತ್ತದೆ. ಒಬ್ಬ ಕ್ಷಯರೋಗಿಯು ಸರಿಯಾಗಿ ಚಿಕಿತ್ಸೆ ಪಡೆಯದಿದ್ದರೆ, ಒಂದು ವರ್ಷಕ್ಕೆ 10 ರಿಂದ 15 ಜನರಿಗೆ ಪ್ರಸಾರ ಮಾಡುತ್ತಾನೆ.

ಕಾರಣ ಗ್ರಾಮದಲ್ಲಿ ಯಾರಿಗಾದರೂ ಸತತ ಎರಡು ವಾರಗಳಿಂದ ಕೆಮ್ಮು ಕಾಣಿಸಿಕೊಂಡರೆ, ಕೆಮ್ಮಿನಲ್ಲಿ ಕಫ ಬಂದರೆ, ಕಫದಲ್ಲಿ ರಕ್ತ ಬಂದರೆ ತಕ್ಷಣ ನಮ್ಮ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ಪರೀಕ್ಷಿಸಿಕೊಂಡು ರೋಗ ಕಂಡು ಬಂದರೆ ಉಚಿತವಾಗಿ ಚಿಕಿತ್ಸೆ ಪಡೆದುಕೊಳ್ಳಬಹುದು.

ಯಾರೂ ಕೂಡ ಟಿ.ಬಿ ರೋಗದ ಬಗ್ಗೆ ನಿರ್ಲಕ್ಷ ಮಾಡಬಾರದು. ಕ್ಷಯರೋಗಿಗಳು ಎಲ್ಲೆಂದರಲ್ಲಿ ಉಗಳಬಾರದು, ಕೆಮ್ಮುವಾಗ ಮತ್ತು ಶೀನುವಾಗ ಕಡ್ಡಾಯವಾಗಿ ಕರವಸ್ತ್ರ ಬಳಸಬೇಕು. ಆಶಾ ಕಾರ್ಯಕರ್ತೆಯರು ತಮ್ಮ ಮನೆಗೆ ಭೇಟಿ ನೀಡಿದಾಗ, ಆರೋಗ್ಯದ ಯಾವುದೇ ಸಮಸ್ಯೆವಿದ್ದರೆ, ಅವರ ಹತ್ತಿರ ಚರ್ಚಿಸಿ, ಸಲಹೆ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಅವರು ಕ್ಷಯರೋಗ(ಟಿ.ಬಿ) ನಿರ್ಮೂಲನೆ ಕುರಿತು ಮಾತನಾಡಿ, ಹುಲಿಗಿ ಗ್ರಾಮದಲ್ಲಿ ಕ್ಷಯರೋಗಿಗಳನ್ನು ಪತ್ತೆ ಹಚ್ಚಿ ಸರಿಯಾದ ಸಮಯಕ್ಕೆ ಚಿಕಿತ್ಸೆ ನೀಡಿ, ಅವರನ್ನು ಗುಣಮುಖರನ್ನಾಗಿ ಮಾಡಬೇಕಾಗಿದೆ. ರೋಗನಿರೋಧಕ ಶಕ್ತಿ ಕಡಿಮೆ ಇರುವವರು ಹಾಗೂ ಸಹವ್ಯಾಧಿಗಳಿಗೆ ಈ ಕ್ಷಯರೋಗಕ್ಕೆ ಬೇಗನೆ ತುತ್ತಾಗುವ ಸಾಧ್ಯತೆ ಇರುತ್ತದೆ. ಮನುಷ್ಯನ ಉಗುರು ಹಾಗೂ ಕೂದಲು ಬಿಟ್ಟು ದೇಹದ ಯಾವುದೇ ಭಾಗಕ್ಕಾದರೂ ಕ್ಷಯರೋಗ(ಟಿ.ಬಿ) ಬರಬಹುದು.

ಆದ್ದರಿಂದ ಕ್ಷಯರೋಗದ ಲಕ್ಷಣ ಉಳ್ಳವರು ಖಾಯಿಲೆಯ ಬಗ್ಗೆ ಅಸಡ್ಡೆ ತೋರದೆ ತಕ್ಷಣ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ಪರೀಕ್ಷಿಸಿಕೊಳ್ಳಬೇಕು. 2025ಕ್ಕೆ ಕ್ಷಯರೋಗ ಮುಕ್ತ ಕೊಪ್ಪಳ ಜಿಲ್ಲೆಯನ್ನಾಗಿ ಮಾಡಲು ಸಹಕರಿಸಿ.

ಪೌಷ್ಠಿಕ ಆಹಾರದ ಸಲುವಾಗಿ ನಿಕ್ಷಯ ಪೋಷಣ ಅಭಿಯಾನದಡಿಯಲ್ಲಿ ಪ್ರತಿರೋಗಿಗೆ ಮಾಸಿಕ ರೂ.500 ಗಳನ್ನು ಅವರ ಖಾತೆಗೆ ಜಮೆ ಮಾಡಲಾಗುತ್ತಿದೆ. ರೋಗಿಯ ಮನೆ ಬೇಟಿ ನೀಡಿ, ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ.

ಸಾರ್ವಜನಿಕರು ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಆರೋಗ್ಯ ಇಲಾಖೆಯೊಂದಿಗೆ ಕೈಜೊಡಿಸಿ, "ಟಿ.ಬಿ ಸೋಲಿಸಿ–ದೇಶ ಗೆಲ್ಲಿಸಿ" ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಜ್ಯೊತಿ, ಎಸ್.ಟಿ.ಎಸ್ ಶ್ರೀನಿವಾಸ, ಆಶಾ ಕಾರ್ಯಕರ್ತೆಯರಾದ ಕೌಶಲ್ಯ, ಮಂಜುಳಾ, ಆರ್.ಕೆ.ಎಸ್.ಕೆ ಕಾರ್ಯಕ್ರಮದ ಆಪ್ತಸಮಾಲೋಚಕರಾದ ಫೈರೋಜ್ ಬೇಗಂ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ಎನ್.ಜಿ.ಓ ಸಂಸ್ಥೆಯ ಪದಾಧಿಕಾರಿಗಳು, ಗ್ರಾ.ಪಂ ಸಿಬ್ಬಂದಿಗಳು, ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಭವಿಷ್ಯ ಬದಲಿಸುವ ಚುನಾವಣೆ: ಸತೀಶ್ ಜಾರಕಿಹೊಳಿ

## ಮತ ಕೇಳುವ ಹಕ್ಕು ಬಿಜೆಪಿಯವರಿಗಿಲ್ಲ: ಶಾಸಕ ಲಕ್ಷ್ಮಣ್ ಸವದಿ



ಗೋಕಾಕ್–:ಕಳೆದ ವಿಧಾನಸಭಾ ಚುನಾವಣೆಗೂ ಮುನ್ನ ಕಾಂಗ್ರೆಸ್ ಪಕ್ಷ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿತು. ಈ ಮೂಲಕ ನುಡಿದಂತೆ ನಡೆಯುವ ಪಕ್ಷ ಕಾಂಗ್ರೆಸ್ ಎಂದು ಸಾಬೀತು ಪಡಿಸಿತು. ಆದರೆ, 10 ವರ್ಷಗಳಿಂದ ಕೇಂದ್ರದಲ್ಲಿರುವ ಬಿಜೆಪಿ ಕೊಟ್ಟ ಒಂದೇ ಒಂದು ಭರವಸೆಯನ್ನು ಈಡೇರಿಸಿಲ್ಲ. ಜನರ ಬಳಿ ಹೋಗಿ ಮತ ಕೇಳಲು ಬಿಜೆಪಿಯವರಿಗೆ ನೈತಿಕ ಹಕ್ಕಿಲ್ಲ ಎಂದು ಮಾಜಿ ಉಪ ಮುಖ್ಯಮಂತ್ರಿ ಹಾಗೂ ಅಥಣಿ ಕ್ಷೇತ್ರದ ಶಾಸಕ ಲಕ್ಷ್ಮಣ್ ಸವದಿ ಆರೋಪಿಸಿದರು.

ಗೋಕಾಕ್ ನಲ್ಲಿ ಮಂಗಳವಾರ ನಡೆದ ಪ್ರಜಾಧ್ವನಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಎಲ್ಲರೂ ಸಹಕರಿಸಬೇಕು. ಎಲ್ಲರೂ ಕಂಕಣ ಬದ್ದರಾಗಿ, ಮತ ಕೇಳಲು ನಮಗೆ ನೈತಿಕ ಹಕ್ಕಿದೆ. ಏಕೆಂದರೆ, ಚುನಾವಣೆಗೂ ಮೊದಲು ಕಾಂಗ್ರೆಸ್ ಪಕ್ಷ ಕೊಟ್ಟಿದ್ದ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಹೀಗಾಗಿ ನಮಗೆ ನೈತಿಕತೆ ಇದೆ ಎಂದು ಹೇಳಿದರು.

2014ರಲ್ಲಿ ವಿವಿಧ ಆಶ್ವಾಸನೆಗಳನ್ನು ಕೊಟ್ಟು ಅಧಿಕಾರಕ್ಕೇರಿದ್ದ ಬಿಜೆಪಿ ಒಂದೇ ಒಂದು ಭರವಸೆಯನ್ನು ಈಡೇರಿಸಿಲ್ಲ. ಸ್ವಿಸ್ ಬ್ಯಾಂಕ್ ನಲ್ಲಿರುವ ಹಣ ತಂದರೆ, ಭಾರತ ದೇಶದಲ್ಲಿ ಸಾಲ ತೀರಿಸ ಬಹುದು, ಉಳಿದ ಹಣದಲ್ಲಿ ಐದು ವರ್ಷ ದೇಶದ ಬಜೆಟ್ ಮಂಡಿಸಬಹುದು. ಜೊತೆಗೆ ಚಿನ್ನದ ರಸ್ತೆ ಮಾಡಬಹುದು ಅಂತ ಚಕ್ರವರ್ತಿ ಸೂಲಿಬೆಲೆ ಎಂಬ ವ್ಯಕ್ತಿ ಹೇಳಿದ್ದೇ ಹೇಳಿದ್ದು. ಆ ಭರವಸೆಗಳೆಲ್ಲಾ ಎಲ್ಲಿ ಹೋದವು ಎಂದು ಸವದಿ ಪ್ರಶ್ನಿಸಿದರು.

ಶಿವಮೊಗ್ಗಕ್ಕೆ ಬುಲೆಟಿನ್ ಟ್ರೈನ್ ಬರಲಿಲ್ಲ. ಬದಲಿಗೆ ಯಡಿಯೂರಪ್ಪ ಮಗನ ರಾಜ್ಯಾಧ್ಯಕ್ಷ ಮಾಡಿದ್ರು. ನದಿಜೋಡಣೆ ಆಗಲಿಲ್ಲ, ಬುಲೆಟ್ ಟ್ರೈನ್ ಬರಲಿಲ್ಲ. ರೈತರ ಆದಾಯ ಡಬಲ್ ಆಗಲಿಲ್ಲ. ಈ ಭಾಗದ ಕಬ್ಬು ಬೆಳೆಗಾರರ ಹಿತರಕ್ಷಣೆ ಕಾಪಾಡಲು ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ. ರೈತರ ಉದ್ದಾರಕ್ಕಿಂತ ಅಂಬಾನಿ, ಅದಾನಿಯೇ ಕೇಂದ್ರ ಸರ್ಕಾರಕ್ಕೆ ಮುಖ್ಯ ಎಂದು ಆರೋಪಿಸಿದರು.

ಈ ಚುನಾವಣೆ ಕೇವಲ ಎರಡು ಅಭ್ಯರ್ಥಿಗಳ ನಡುವೆ ನಡೆಯುತ್ತಿರುವ ಚುನಾವಣೆ ಅಲ್ಲ. ಇಡೀ ದೇಶದ ಭವಿಷ್ಯ ಬದಲಿಸುವ ಚುನಾವಣೆ ಇದಾಗಿದೆ. ಗೋಕಾಕ್, ಅರಭಾವಿ ಭಾಗದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬೋಣ, ಎಲ್ಲರೂ ಒಗ್ಗೂಡಿ ಚುನಾವಣೆ ಎದುರಿಸೋಣ. ಇದೊಂದು ಐತಿಹಾಸಿಕ ಚುನಾವಣೆಯಾಗಿದ್ದು, ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ರಚಿಸೋಣ ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಕರೆ ನೀಡಿದರು.

# ಬಿಜೆಪಿ, ಹಿಂದುಪರ ಸಂಘಟನೆಗಳು ಯಾಕೆ ಪ್ರಜ್ವಲ್ ವಿರುದ್ಧ ಪ್ರತಿಭಟನೆ ಮಾಡುತ್ತಿಲ್ಲ ಜ್ಯೋತಿ ಪ್ರಶ್ನೆ



ಕೊಪ್ಪಳ : ದೇಶ ಕಂಡರಿಯದಂತಹ ಹೊಲಸು ಕೆಲಸ ಮಾಡಿರುವ ಜೆಡಿಎಸ್ ಸಂಸದ ಎನ್‌ಡಿಎ ಅಭ್ಯರ್ಥಿ ಪ್ರಜ್ವಲ್ ರೇವಣ್ಣನ ಕಾಮಕಾಂಡ ರಾಜ್ಯದ ಮರ್ಯಾದೆ ತೆಗೆದಿದ್ದು, ಆತನ ವಿರುದ್ಧ ಬಿಜೆಪಿ ಮತ್ತು ಹಿಂದೂಪರ ಸಂಘಟನೆಗಳು ಯಾಕೆ ಪ್ರತಿಭಟನೆ ಮಾಡುತ್ತಿಲ್ಲ ಎಂದು ಕಾಂಗ್ರೆಸ್ ಮುಖಂಡೆ ಜ್ಯೋತಿ ಎಂ. ಗೊಂಡಬಾಳ ಪ್ರಶ್ನೆ ಮಾಡಿದ್ದಾರೆ.

ಬಿಜೆಪಿಯ ಜೋಷಿ, ಸಿ.ಟಿ. ರವಿ, ಮುತಾಲಿಕ್, ಶೃತಿ, ಶ್ರೀರಾಮುಲು, ನಡ್ಡಾ, ಶೆಟ್ಟರ್ ಹಾಸನದ ಕಾಮಕಾಂಡ ತಮಗೆ ಸಂಬಂಧವೇ ಇಲ್ಲ ಎನ್ನುವ ರೀತಿ ವರ್ತನೆ ಮಾಡುತ್ತಿರುವದೇ ಅವರ ಹಿಂದೂಪರ ವಿಚಾರಧಾರೆಗಳ ಮೇಲೆ ಅನುಮಾನ ಮೂಡಿಸುತ್ತಿದೆ, ಅವರು ಕೇವಲ ರಾಜಕೀಯದ ಹಿಂದುಗಳು ಇರಬೇಕು ಎಂದು ಲೇವಡಿ ಮಾಡಿದ್ದಾರೆ.

ಇನ್ನು ಶಾ ಅವರು ಪ್ರಜ್ವಲ್ ಪ್ರಕರಣದ ಬಗ್ಗೆ ತಪ್ಪು ಮಾಹಿತಿ ಹಂಚುತ್ತಿದ್ದಾರೆ, ಈಗಾಗಲೇ ರಾಜ್ಯ ಸರಕಾರ ಎಸ್‌ಐಟಿ ರಚನೆ ಮತ್ತು ತನಖೆ ಮಾಡುತ್ತಿರುವ ಕುರಿತು ಮಾಹಿತಿ ಕೊರತೆಯಿಂದ ಅವರು ಮಾತನಾಡುತ್ತಿದ್ದಾರೆ, ಹುಬ್ಬಳ್ಳಿ ಭೇಟಿ ಮಾಡುವ ಮೊದಲು ಹಾಸನದ ಸಂತ್ರಸ್ಥೆಯರನ್ನು ಭೇಟಿ ಮಾಡಿ ಬರಲಿ ಎಂದು ಒತ್ತಾಯಿಸಿದ್ದಾರೆ.

ಈ ವಿಚಾರದಲ್ಲಿ ಬಿಜೆಪಿ ಬೀದಿಗೆ ಬಂದು ಹೋರಾಟ ಮಾಡುತ್ತಿಲ್ಲ ಎಂಬುದೇ ಅವರ ನೀತಿಗೆಟ್ಟ, ಮಾನಗೆಟ್ಟ ಧೋರಣೆಗೆ ಸಾಕ್ಷಿ, ಒಬ್ಬ ಮಹಿಳೆಯ ಹತ್ಯೆ ಮಾಡಿದವ ಮುಸ್ಲಿಂ ಎಂದ ತಕ್ಷಣ ಮುಗಿಬಿದ್ದು ಹೋರಾಟ ಮಾಡಿದವರು ಸಾವಿರಾರು ಹಿಂದೂ ಮಹಿಳೆಯರ ಮೇಲೆ ಹಿಂದೂ ಒಬ್ಬನು ಮಾಡಿದ ಅನಾಚಾರ ಖಂಡಿಸಲಾರದಷ್ಟು ನೀಚತನಕ್ಕೆ ಬಂದಿರುವದನ್ನು ಜನ ಗಮನಸುತ್ತಿದ್ದಾರೆ. ಅವು ಸುಳ್ಳು ಫೋಟೊ ವಿಡಿಯೋ ಆಗಿದ್ದರೆ ಈಗಾಗಲೇ ಪ್ರಜ್ವಲ್ ಪರ ಸಾಕಷ್ಟು ಹೋರಾಟ ಮಾಡಿಸುತ್ತಿದ್ದರು, ಸ್ವತಃ ಪ್ರಜ್ವಲ್ ತಂದೆ ಅವು ಹಳೆಯ ವಿಡಿಯೋ ಎಂದಿದ್ದು, ಸಿಟಿ ರವಿ ತಮಗೆ ಮೊದಲೇ ಗೊತ್ತಿತ್ತು ಎಂದಿರು ವದು, ಕುಮಾರಸ್ವಾಮಿ ಉಪ್ಪು ತಿಂದವರು ನೀರು ಕುಡಿಯಲಿ ತಮಗೂ ರೇವಣ್ಣನ ಕುಟುಂಬಕ್ಕೂ ಸಂಬಂಧವೇ ಇಲ್ಲ ಎಂದಿರುವದು ಮತ್ತು ಅಪರಾಧಿ ದೇಶ ಬಿಟ್ಟು ಓಡಿ ಹೋಗಿರುವದು ಭಾನಗೇಡಿ ಕೆಲಸ ಮಾಡಿರುವದಕ್ಕೆ ಪುರಾವೆ, ಯಾವ ಮುಖ ಇಟ್ಟುಕೊಂಡು ಜನರ ಬಳಿ ಜೆಡಿಎಸ್ ತಮ್ಮ ಮೈತ್ರಿ ಅಭ್ಯರ್ಥಿಗಳ ಪರ ಮತ ಕೇಳುತ್ತಾರೆ, ರಾಜ್ಯದ ಸುಮಾರಸ್ವಾಮಿ ದಾರಿ ಬಿಟ್ಟ ಮಹಿಳೆಯರು ಎಂದಿದ್ದು ಇದಕ್ಕೇನಾ? ಎಂದು ಜ್ಯೋತಿ ಪ್ರಶ್ನೆ ಮಾಡಿದ್ದಾರೆ.

ಕಾರ್ತಿಕ್ ಎಂಬ ದೇವೇಗೌಡರ ಕುಟುಂಬದ ಮಾಜಿ ಕಾರು ಚಾಲಕನೇ ವಿಡಿಯೋ ಇರುವ ಪೆನ್‌ಡ್ರೈವ್ ಅನ್ನು ಬಿಜೆಪಿ ಮುಖಂಡ ದೇವರಾಜೇಗೌಡರಿಗೆ ಕೊಟ್ಟಿದ್ದು, ಕಾಂಗ್ರೆಸ್‌ಗೆ ಇದು ಸಂಬಂಧ ಇಲ್ಲ ಎಂದು ವಿಡಿಯೋ ಹೇಳಿಕೆ ನೀಡಿದ್ದು, ಆತನಗೆ ಭದ್ರತೆ ಕೊಡಬೇಕು ಮತ್ತು ಸಂತ್ರಸ್ಥ ಮಹಿಳೆಯರಿಗೆ ರಕ್ಷಣೆ ನೀಡಬೇಕು ಜೊತೆಗೆ ಸಂತ್ರಸ್ಥ ಮಹಿಳೆಯರನ್ನು ಎಸ್‌ಐಟಿ ಅಕ್ಕಪಕ್ಕದ ಜನರಿಗೆ ತಿಳಿಯದಂತೆ ಸಂಪರ್ಕ ಮಾಡಿ ಅವರ ಘನತೆ ಧಕ್ಕೆಯಾಗದಂತೆ ನಡೆಸಿಕೊಂಡರೆ ಸರಿಯಾದ ಸಾಕ್ಷಿ ಲಭ್ಯವಾಗುತ್ತವೆ ಎಂದು ಮನವಿ ಮಾಡಿದ್ದಾರೆ. ದೇಶದಲ್ಲಿ ಹೆಣ್ಣುಮಕ್ಕಳ ಮಾನ ಉಳಿಬೇಕು ಎಂದರೆ ಬಿಜೆಪಿ, ಮೋದಿ ಶಾ ಸೋಲಬೇಕು ಎಂದಿದ್ದಾರೆ.

# ಜಾತ್ರೆಯಲ್ಲಿ ಭಾಗಿಯಾಗಿ ಕುಸ್ತಿ ಪಂದ್ಯ ವಿಕ್ಷೀಸಿದ ಜಗದೀಶ್ ಶೆಟ್ಟರ್



ಬೆಳಗಾವಿ: ಬೆಳಗಾವಿ ತಾಲೂಕಿನ ಯಳ್ಳೂರು ಗ್ರಾಮದಲ್ಲಿ ರಾಷ್ಟ್ರಮಟ್ಟದ ಕುಸ್ತಿ ಪಂದ್ಯ ಆಯೋಜನೆ ಮಾಡಲಾಗಿದ್ದು, ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಜಗ ದೀಶ್ ಶೆಟ್ಟರ್ ಅವರು ಭಾಗಿ ಆಗಿ ಕುಸ್ತಿ ಪಂದ್ಯ ವೀಕ್ಷಿಸಿದರು.

ಈ ವೇಳೆ ಮಾಜಿ ವಿಧಾನ ಪರಿಷತ್ ಸದಸ್ಯ ಮಹಾಂತೇಶ್ ಕವಟಗಿಮಠ ಸಾಥ್ ನೀಡಿದರು.

ಗುರುವಾರ ಸಾಯಂಕಲಾ ಯಳ್ಳೂರು ಗ್ರಾಮದ ಹೊರವಲಯದಲ್ಲಿ ಚಾಂಗಳೇಶ್ವರ ದೇವಿ ಮತ್ತು ಕಲ್ಮೇಶ್ವರ್ ದೇವರ ಜಾತ್ರೆ ನಿಮಿತ್ತ ಆಯೋಜನೆ ಮಾಡಲಾಗಿದ್ದ ರಾಷ್ಟ್ರಮಟ್ಟದ ಕುಸ್ತಿ ಪಂದ್ಯವನ್ನು ಜಗದೀಶ್ ಶೆಟ್ಟರ್ ಅವರು ವಿಕ್ಷಣೆ ಮಾಡಿದರು.

ಇದಕ್ಕಿಂತ ಮುಂಚೆ ಯಳ್ಳರು ಗ್ರಾಮದಲ್ಲಿರುವ ಚಾಂಗಳೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ದೇವಿ ದರ್ಶನ ಪಡೆದರು.

ಈ ಒಂದು ಕುಸ್ತಿ ಪಂದ್ಯದಲ್ಲಿ ಕರ್ನಾಟಕ, ಹರಿಯಾಣ, ಪಂಜಾಬ, ದೆಹಲಿ, ಮಾಹಾರಾಷ್ಟ್ರ ಸೇರಿದಂತೆ ಅನೇಕ ರಾಜ್ಯದ ಕುಸ್ತಿಪಟುಗಳು ಭಾಗ ವಹಿಸಿದರು. ಜಗದೀಶ್ ಶೆಟ್ಟರ್ ಅವರು ಭೇಟಿ ನೀಡಿದ ವೇಳೆ ಸಾಂಪ್ರದಾಯಕ ವಾದ್ಯಗಳನ್ನು ನುಡಿಸುವ ಮೂಲಕ ಭವ್ಯವಾಗಿ ಸ್ವಾಗತ ಕೋರಲಾಯಿತು.